ಕರ್ನಾಟಕ ಸರ್ಕಾರ

# ರಾಷ್ಟ್ರೀಯ ಆರೋಗ್ಯ ಅಭಿಯಾನ

ಕರ್ನಾಟಕ ರಾಜ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ, ಬೆಂಗಳೂರು
ಆರೋಗ್ಯ ಸೌಧ, ಮಹಡಿ, ಮಾಗಡಿ ರಸ್ತೆ, ಬೆಂಗಳೂರು-560023

ಸಂಖ್ಯೆ:ಎನ್‌ಹೆಚ್‌ಎಂ/ಡಿಡಿ/ಐಎಂಎಂ/41/2021-22 ದಿನಾಂಕ:22.07.2021

ಇವರಿಗೆ,

1. ಮುಖ್ಯ ಆಯುಕ್ತರು, ಬಿಬಿಎಂಪಿ, ಬೆಂಗಳೂರು.
2. ಎಲ್ಲಾ ಜಿಲ್ಲಾ ಜಿಲ್ಲಾಧಿಕಾರಿಗಳು, ಜಿಲ್ಲಾಡಳಿತ ಕಛೇರಿ.

ಮಾನ್ಯರೆ,

ವಿಷಯ: ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಅನುದಾನ ರಹಿತ ಶಾಲೆಗಳ ಶಿಕ್ಷಕರು ಮತ್ತು ಭೋದಕ / ಭೋದಕೇತರ ಸಿಬ್ಬಂದಿಗಳಿಗೆ ಕೋವಿಡ್-19 ಲಸಿಕಾಕರಣ ನಡೆಸುವ ಕುರಿತು

ಉಲ್ಲೇಖ:
1. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ ರವರ ಪತ್ರ ಸಂಖ್ಯೆ: ಮುಕಾ/2767561/2021 ದಿನಾಂಕ:20.07.2021.
2. ದಿನಾಂಕ 20.07.2021 ರಂದು ನಡೆದ ರಾಜ್ಯ ಮಟ್ಟದ ಚಾಲನಾ ಸಮಿತಿ ಸಭೆಯ ನಿರ್ದೇಶನದಂತೆ

**********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ 1 ರ ಪತ್ರದಲ್ಲಿ ತಿಳಿಸಿದಂತೆ ಹಾಗೂ ದಿನಾಂಕ 20.07.2021 ರಂದು ಮಾನ್ಯ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ ರವರ ಅಧ್ಯಕ್ಷತೆಯಲ್ಲಿ ರಾಜ್ಯದಲ್ಲಿನ ಕೋವಿಡ್ ಲಸಿಕಾಕರಣ ಪ್ರಗತಿ ಪರಿಶೀಲನೆಗಾಗಿ ನಡೆದ ರಾಜ್ಯ ಮಟ್ಟದ ಚಾಲನಾ ಸಮಿತಿ ಸಭೆಯಲ್ಲಿ ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಅನುದಾನ ರಹಿತ ಶಾಲೆಗಳ ಶಿಕ್ಷಕರು ಮತ್ತು ಭೋದಕ/ ಭೋದಕೇತರ ಸಿಬ್ಬಂದಿಗಳಿಗೆ ಕೋವಿಡ್-19 ಲಸಿಕಾಕರಣವನ್ನು ನಡೆಸಲು ನಿರ್ದೇಶಿಸಿರುತ್ತಾರೆ. ಆದ್ದರಿಂದ ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಅನುದಾನ ರಹಿತ ಶಾಲೆಗಳ ಶಿಕ್ಷಕರು ಮತ್ತು ಭೋದಕ / ಭೋದಕೇತರ ಸಿಬ್ಬಂದಿಗಳಿಗೆ ಕೋವಿಡ್-19 ಲಸಿಕಾಕರಣಕ್ಕಾಗಿ ಅಭಿಯಾನವನ್ನು ಏರ್ಪಡಿಸಿ ಸಂಪನ್ನಗೊಳಿಸಬೇಕಾಗಿರುತ್ತದೆ.

<u>ಈ ಹಿನ್ನೆಲೆಯಲ್ಲಿ ಜಿಲ್ಲೆಗಳಲ್ಲಿ ಕೆಳಕಂಡಂತೆ ಕ್ರಮ ಕೈಗೊಳ್ಳಲು ತಿಳಿಸಲಾಗಿದೆ.</u>

1. ಕೋವಿಡ್ ಲಸಿಕಾಕರಣಕ್ಕಾಗಿ ಜಿಲ್ಲೆಯ ಹಾಗೂ ಬಿಬಿಎಂಪಿ ವ್ಯಾಪ್ತಿಯ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಅನುದಾನ ರಹಿತ ಶಾಲೆಗಳ ಶಿಕ್ಷಕರು ಮತ್ತು ಭೋದಕ / ಭೋದಕೇತರ ಸಿಬ್ಬಂದಿಗಳ (ಸಂಸ್ಥೆಯ ಮುಖ್ಯಸ್ಥರಿಂದ ದೃಢೀಕರಿಸಿದ) ಪಟ್ಟಿಯನ್ನು ಶಿಕ್ಷಣ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗೆ ಒದಗಿಸುವುದು.
2. ಪ್ರತಿ ಶಾಲೆಯ ಮುಖ್ಯಸ್ಥರು ಒಬ್ಬ ಜವಾಬ್ದಾರಿಯುತ ನೋಡಲ್ ಅಧಿಕಾರಿಯನ್ನು ನಿಯೋಜಿಸುವುದು ಮತ್ತು ನೋಡಲ್ ಅಧಿಕಾರಿಯು ಆರೋಗ್ಯ ಇಲಾಖೆಯ ಅಧಿಕಾರಿಗಳೊಂದಿಗೆ ಸಮನ್ವಯಿಸುವುದು.
3. ಸದರಿ ಪಟ್ಟಿಯಲ್ಲಿನ ಸಂಖ್ಯೆಗನುಗುಣವಾಗಿ ಹಾಗೂ ಲಸಿಕೆಯ ಲಭ್ಯತೆಗೆ ಅನುಗುಣವಾಗಿ ಜಿಲ್ಲಾ ಆರ್‌ಸಿಹೆಚ್ ಅಧಿಕಾರಿಗಳು ಕ್ರಿಯಾ ಯೋಜನೆ ತಯಾರಿಸುವುದು ಮತ್ತು ಸಿದ್ಧತೆ ನಡೆಸುವುದು.
4. ಶಿಕ್ಷಣ ಇಲಾಖೆಯ ಅಧಿಕಾರಿಗಳು ಕ್ರಿಯಾ ಯೋಜನೆಯಂತೆ ಅರ್ಹ ಫಲಾನುಭವಿಗಳಿಗೆ ಲಸಿಕಾಕರಣದ ಸ್ಥಳ, ದಿನಾಂಕ ಮತ್ತು ಸಮಯದ ಮಾಹಿತಿಯನ್ನು ನೀಡುವುದು.

5. ಸದರಿ ಪಟ್ಟಿಯಲ್ಲಿನ ಅರ್ಹ ಫಲಾನುಭವಿಗಳ ಸಂಖ್ಯೆ ಹಾಗೂ ಲಸಿಕೆಗಳ ಲಭ್ಯತೆಗೆ ಅನುಸಾರವಾಗಿ ಶಾಲಾ ಆವರಣ ಅಥವಾ ಆಯ್ದ ಕಾಲೇಜು ಆವರಣದಲ್ಲಿ Work place vaccination site SOP ಯಂತೆ ಲಸಿಕಾ ಸತ್ರವನ್ನು ಆಯೋಜಿಸಿ ಅಭಿಯಾನ ಮಾದರಿಯಲ್ಲಿ ಕೋವಿಡ್ ಲಸಿಕಾಕರಣವನ್ನು ಸಂಪನ್ನಗೊಳಿಸುವುದು.
6. ಶಾಲೆಯ ಮುಖ್ಯಸ್ಥರು ತಮ್ಮ ಅಧೀನದ ಸಿಬ್ಬಂದಿ 100% ಲಸಿಕೆ ಪಡೆದಿರುವುದನ್ನು ಖಾತರಿಪಡಿಸಿಕೊಳ್ಳುವುದು.
7. ಶಿಕ್ಷಣ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು ತಮ್ಮ ಜಿಲ್ಲೆಯ ಶಿಕ್ಷಕರು, ಭೋದಕ/ ಭೋದಕೇತರ ಸಿಬ್ಬಂದಿಗಳ ಲಸಿಕಾಕರಣದ ದೈನಂದಿನ ಪ್ರಗತಿಯ ವರ್ಗೀಕೃತ ವರದಿಯನ್ನು (ಸರ್ಕಾರಿ / ಅನುದಾನಿತ / ಅನುದಾನ ರಹಿತ) ಶಾಲೆಗಳಿಂದ ಪಡೆದು ಲಸಿಕಾಕರಣ ಸಂಪೂರ್ಣಗೊಳಿಸುವಿಕೆಯ ಜವಾಬ್ದಾರಿ ವಹಿಸುವುದು.
8. ಎಲ್ಲಾ ಹಂತಗಳಲ್ಲಿ ಆರೋಗ್ಯ ಇಲಾಖೆ ಮತ್ತು ಶಿಕ್ಷಣ ಇಲಾಖೆಗಳು ಸಮನ್ವಯಿಸುವುದು ಮತ್ತು ಭಾರತ ಸರ್ಕಾರದ ಕೋವಿಡ್-19 ಲಸಿಕಾಕರಣದ ಮಾರ್ಗಸೂಚಿಯನ್ನು ಕಡ್ಡಾಯವಾಗಿ ಪಾಲಿಸುವುದು.

ತಾವುಗಳು ಸಂಬಂಧಪಟ್ಟ ಇಲಾಖೆಗಳ ಮುಖ್ಯಸ್ಥರುಗಳೊಂದಿಗೆ ಸಮನ್ವಯ ಸಭೆ ನಡೆಸಿ ಕ್ರಿಯಾ ಯೋಜನೆ, ಅನುಷ್ಠಾನ ಹಾಗೂ ಪ್ರಗತಿ ಪರಿಶೀಲನೆಯ ಮೇಲ್ವಿಚಾರಣೆ ನಡೆಸುವುದು.

ಸದರಿ ಕಾರ್ಯಾಚರಣೆಯ ಯಶಸ್ವಿ ಅನುಷ್ಠಾನಕ್ಕಾಗಿ ತಮ್ಮ ಸಂಪೂರ್ಣ ಸಹಕಾರ ಕೋರಲಾಗಿದೆ.

ಅರುಂಧತಿ

ಅಭಿಯಾನ ನಿರ್ದೇಶಕರು
ರಾಷ್ಟ್ರೀಯ ಆರೋಗ್ಯ ಅಭಿಯಾನ

**ಸೂಕ್ತ ಕ್ರಮಕ್ಕಾಗಿ:**

1. ಎಲ್ಲಾ ಜಿಲ್ಲೆಯ ಜಿಲ್ಲಾ ಆರೋಗ್ಯ ಮತ್ತ ಕುಟುಂಬ ಕಲ್ಯಾಣ ಅಧಿಕಾರಿಗಳು.
2. ಮುಖ್ಯ ಆರೋಗ್ಯಾಧಿಕಾರಿಗಳು (ಸಾರ್ವಜನಿಕ ಆರೋಗ್ಯ), ಬಿಬಿಎಂಪಿ.
3. ಎಲ್ಲಾ ಜಿಲ್ಲೆಯ ಆರ್.ಸಿ.ಹೆಚ್ ಅಧಿಕಾರಿಗಳು,
4. ಲಸಿಕಾಧಿಕಾರಿಗಳು (ಬಿ.ಬಿ.ಎಂ.ಪಿ)

**ಮಾಹಿತಿಗಾಗಿ:**

1. ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ಕರ್ನಾಟಕ ಸರ್ಕಾರ.
2. ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕರ್ನಾಟಕ ಸರ್ಕಾರ.
3. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ.
4. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು.
5. ವಿಶೇಷ ಆಯುಕ್ತರು (ಆರೋಗ್ಯ), ಬಿಬಿಎಂಪಿ.
6. ಎಲ್ಲಾ ಜಿಲ್ಲಾ ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು, ಜಿಲ್ಲಾ ಪಂಚಾಯತ್ ಕಛೇರಿ.
7. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಬೆಂಗಳೂರು.

8. ಅಪರ ನಿರ್ದೇಶಕರು, ರಾಷ್ಟ್ರೀಯ ಆರೋಗ್ಯ ಅಭಿಯಾನ, ಬೆಂಗಳೂರು.
9. ಯೋಜನಾ ನಿರ್ದೇಶಕರು (ಆರ್.ಸಿ.ಹೆಚ್), ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಬೆಂಗಳೂರು.
10. ಉಪ ನಿರ್ದೇಶಕರು (ಲಸಿಕೆ), ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಬೆಂಗಳೂರು.
11. ಉಪ ನಿರ್ದೇಶಕರು, ರಾಷ್ಟ್ರೀಯ ಆರೋಗ್ಯ ಅಭಿಯಾನ, ಬೆಂಗಳೂರು.
12. ಕಛೇರಿ ಪ್ರತಿ